## NOVEMBE13, 2024
## AKASHAVANI - DHARWAD
## PRADESH SAMACHARA (KANNADA) 12 P.M.

**ರಾಜ್ಯದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಾದ ರಾಮನಗರ ಜಿಲ್ಲೆಯ ಚನ್ನಪಟ್ಟಣ,** ಬಳ್ಳಾರಿ ಜಿಲ್ಲೆಯ ಸಂಡೂರು ಹಾಗೂ ಹಾವೇರಿ ಜಿಲ್ಲೆಯ ಶಿಗ್ಗಾಂವಿ ಕ್ಷೇತ್ರಗಳಿಗೆ ಇಂದು ಉಪಚುನಾವಣೆ ನಡೆಯುತ್ತಿದೆ. ಬೆಳಗ್ಗೆ 7 ರಿಂದ ಮತದಾನ ಆರಂಭವಾಗಿದ್ದು, ಸಂಜೆ 6 ರವರೆಗೆ ನಡೆಯಲಿದೆ. ಮೂರೂ ಮತಕ್ಷೇತ್ರಗಳಲ್ಲಿ ಒಟ್ಟು 524 ಮತಗಟ್ಟೆಗಳಿಗೆ ವೆಬ್‌ಕ್ಯಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆ ಹಿನ್ನೆಲೆಯಲ್ಲಿ, ಇಂದು ಈ ಭಾಗದ ಸರ್ಕಾರಿ ನೌಕರರು, ಶಾಲಾ ಕಾಲೇಜುಗಳು ಹಾಗೂ ಖಾಸಗಿ ಕಂಪನಿಗಳಲ್ಲಿ ಕೆಲಸ ಮಾಡುವ ಮತದಾರರಿಗೆ, ಒಂದು ದಿನದ ವೇತನ ಸಹಿತ ರಜೆ ಘೋಷಿಸಲಾಗಿದೆ.

ಇದೇ 23 ರಂದು ಈ 3 ಕ್ಷೇತ್ರಗಳ ಉಪ ಚುನಾವಣೆಯ ಫಲಿತಾಂಶ ಪ್ರಕಟವಾಗಲಿದೆ. **ಚನ್ನಪಟ್ಟಣ ವಿಧಾನಸಭಾ** ಕ್ಷೇತ್ರಕ್ಕೆ ನಡೆಯುತ್ತಿರುವ ಉಪಚುನಾವಣೆಗೆ ಮತದಾನ ಬಿರುಸಿನಿಂದ ಸಾಗಿದೆ. ಗ್ರಾಮೀಣ ಭಾಗಗಳಲ್ಲಿ ಮತದಾರರು ಮತ ಚಲಾಯಿಸುತ್ತಿದ್ದಾರೆ. ಪುರುಷರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಸಾಲಿನಲ್ಲಿ ನಿಂತು ಮತದಾನ ಮಾಡುತ್ತಿರುವುದು ವಿಶೇಷವಾಗಿದೆ. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ, ಪ್ರತಿ ಮತಗಟ್ಟೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮತ್ತು ಸಿಸಿಟಿವಿ ಕಣ್ಗಾವಲು ಹಾಕಲಾಗಿದೆ. 11 ಗಂಟೆ ವೇಳೆಗೆ ಶೇಕಡ 27.02 ಮತದಾನವಾಗಿದೆ. ಪುರುಷರು ಹಾಗೂ ಮಹಿಳೆಯರು ಸೇರಿದಂತೆ ಒಟ್ಟು 62 ಸಾವಿರದ 941 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. **ತೀವ್ರ ಕುತೂಹಲ ಕೆರಳಿಸಿರುವ ಚ**ನ್ನಪಟ್ಟಣ ಕ್ಷೇತ್ರದಲ್ಲಿ ಎನ್.ಡಿ.ಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಹಾಗೂ ಕಾಂಗ್ರೆಸ ಅಭ್ಯರ್ಥಿ ಸಿ.ಪಿ.ಯೋಗೇಶ್ವರ ನಡುವೆ ನೇರ ಸ್ಪರ್ಧೆ ಏರ್ಪಟ್ಟಿದೆ. **ಹಾವೇರಿ ಜಿಲ್ಲೆಯ ಶಿಗ್ಗಾಂವ** ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ 241 ಮತಗಟ್ಟೆಗಳಲ್ಲಿ ಮತದಾನ ಪ್ರಗತಿಯಲ್ಲಿದೆ. ಮತದಾನದ ಪ್ರಮಾಣ ಹೆಚ್ಚಿಸಲು 8 ವಿಶೇಷ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹ್ಮದಖಾನ್ ಪಠಾಣ ನಡುವೆ ನೇರ ಪೈಪೋಟಿ ಇದ್ದು, ಒಟ್ಟು 8 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬೆಳಿಗ್ಗೆ 11 ಗಂಟೆಯವರೆಗೆ ಶೇಕಡಾ 26.01 ರಷ್ಟು ಮತದಾನವಾಗಿದೆ. ಮತದಾನದ ಮೇಲೆ ಹೆಚ್ಚಿನ ನಿಗಾ ವಹಿಸಲು 100 ಸೂಕ್ಷ್ಮ ವೀಕ್ಷಕರು ಹಾಗೂ 20 ವಿಡಿಯೋ ಛಾಯಾಗ್ರಾಹಕರನ್ನು ನಿಯೋಜಿಸಲಾಗಿದೆ. ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಶಿಗ್ಗಾವಿಯ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಮತದಾನ ಮಾಡಿದರು. **ಸಂಡೂರು ವಿಧಾನಸಭಾ ಕ್ಷೇತ್ರದ** ಉಪ ಚುನಾವಣೆಯ ಮತದಾನ ಬೆಳಿಗ್ಗೆ 7 ಗಂಟೆಗೆ ಆರಂಭಗೊಂಡಿದ್ದು, 11 ಗಂಟೆ ವೇಳೆಗೆ ಶೇಕಡ 26 ರಷ್ಟು ಮತದಾನವಾಗಿದೆ. ಕ್ಷೇತ್ರದ 253 ಮತಗಟ್ಟೆಗಳಲ್ಲಿ ಮತದಾನ ಸುಗಮವಾಗಿ ನಡೆಯುತ್ತಿದೆ. ವಿಕಲಾಂಗಚೇತನರಿಗೆ ಮತಗಟ್ಟೆ ಬಳಿ ವೀಲ್ಹ ಚೇರ್ ವ್ಯವಸ್ಥೆ ಮಾಡಲಾಗಿದೆ. ಸಂಸದ ಈ ತುಕರಂ ಅವರು ಸಂಡೂರಿನ ಪಂಚಾಯತ್ ರಾಜ್ ಇಂಜಿನಿಯರಿಂಗ್ ಕಟ್ಟೆದಲ್ಲಿನ ಮತಗಟ್ಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಅನ್ನಪೂರ್ಣ ಮತ್ತು ಕುಟುಂಬದೊಂದಿಗೆ ಆಗಮಿಸಿ ಮತ ಚಲಾಯಿಸಿದ್ದಾರೆ.

<><><>

**‘ನಮ್ಮ ಊರಿಗೆ ನಮ್ಮ ಶಾಸಕರು’ ಕಾರ್ಯಕ್ರಮದಡಿ ಇದುವರೆಗೂ ಚಿಕ್ಕಬಳ್ಳಾಪುರ** ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 43 ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಬಹುತೇಕ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ತಿಳಿಸಿದ್ದಾರೆ.

<><><>

**ಹಾಸನ ಜಿಲ್ಲಾ ವಿಪತ್ತು ನಿರ್ವಹಣೆಯಲ್ಲಿ ಯಾವುದೇ ಲೋಪವಾಗದಂತೆ** ನಿಗಾವಹಿಸಲು ಜಿಲ್ಲಾಧಿಕಾರಿ ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲೆಯಲ್ಲಿ ಅತಿಯಾದ ಮಳೆಯಿಂದ ಹಾನಿಯಾಗಿರುವ ಮೂಲಭೂತ ಸೌಕರ್ಯಗಳ ದುರಸ್ತಿಗೆ

ಸರ್ಕಾರದಿಂದ ಮಂಜೂರಾಗಿ ಬಂದಿರುವ  ಕಾಮಗಾರಿಗಳ ಪಟ್ಟಿಯಂತೆ  ಕ್ರಮಕೈಗೊಂಡು, ಕಾಮಗಾರಿ ಪೂರ್ಣಗೊಳಿಸಿದ ನಂತರ ಜಿ.ಪಿ.ಎಸ್ ಚಿತ್ರಗಳೊಂದಿಗೆ ವರದಿ ನೀಡುವಂತೆ  ನಿರ್ದೇಶಿಸಿದರು.

<><><>

**ಚಿಕ್ಕಬಳ್ಳಾಪುರದ ಮೂಲಕ ಹಾದು** ಹೋಗಿರುವ ರಾಷ್ಟ್ರೀಯ ಹೆದ್ದಾರಿ 44 ರ ಚದುಲಪುರ ಕ್ರಾಸ್ ಬಳಿ ಇಂದು ಟಿಪ್ಪರ್ ಮತ್ತು ದ್ವಿಚಕ್ರ ವಾಹನದ ನಡುವೆ ಅಪಘಾತ ಸಂಭವಿಸಿದ್ದು, ದ್ವಿಚಕ್ರವಾಹನ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸ್ಥಳಕ್ಕೆ ಹೆಚ್ಚುವರಿ ಎಸ್ಪಿ ಮಹಮ್ಮದ್ ಖಾಸಿಂ ರಾಜಾ ಭೇಟಿ ನೀಡಿ ಪರಿಶೀಲಿಸಿದರು.

<><><>

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ,** ರಂಗಾಯಣ ಹಾಗೂ ಸಕ್ಕರಿ ಬಾಳಾಚಾರ್ಯ ಟ್ರಸ್ಟ ಧಾರವಾಡ ಇವುಗಳ ಸಂಯುಕ್ತ ಆಶ್ರಯದಲ್ಲಿ ಆಧುನಿಕ ಕನ್ನಡ ರಂಗಭೂಮಿ ದಿನದ ಅಂಗವಾಗಿ ಧಾರವಾಡದ ಬಸವರಾಜ ರಾಜಗುರು ಬಯಲು ರಂಗ ಮಂದಿರದಲ್ಲಿ ನಾಳೆಯಿಂದ 3 ದಿನಗಳ ಕಾಲ ನಾಟಕೋತ್ಸವ ಆಯೋಜಿಸಲಾಗಿದೆ. ಸಕ್ಕರಿ ಬಾಳಾಚಾರ್ಯ ಟ್ರಸ್ಟ ಅಧ್ಯಕ್ಷರಾದ ಬಾಬುರಾವ್ ಸಕ್ಕರಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಧಾರವಾಡ ರಂಗಾಯಣದ ನಿರ್ದೇಶಕರಾದ ಡಾಕ್ಟರ್ ರಾಜು ತಾಳಿಕೋಟಿ ಅಧ್ಯಕ್ಷತೆವಹಿಸಲಿದ್ದಾರೆ. ಸರಕಾರಿ ಪದವಿ ಕಾಲೇಜಿನ ಉಪನ್ಯಾಸಕರಾದ ಡಾಕ್ಟರ್ ಗುರುನಾಥ್ ಬಡಿಗೇರ 'ಶಾಂತ ಕವಿಗಳ ಬದುಕು ಬರಹ' ಕುರಿತು ಉಪನ್ಯಾಸ ನೀಡಲಿದ್ದಾರೆ.

<><><>

**ಕರ್ನಾಟಕ ಸುಗಮ** ಸಂಗೀತ ಪರಿಷತ್ತು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ, ನಾಡಿದ್ದು ಶುಕ್ರವಾರ, ನವೆಂಬರ್ 15 ರಂದು ಸಂಜೆ, ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಆವರಣದಲ್ಲಿರುವ ಶ್ರೀ ಕೃಷ್ಣ ರಾಜ ಪರಿಷತ್ತಿನ ಮಂದಿರದಲ್ಲಿ 'ಮರೆಯಲಾಗದ ಮಹನೀಯರು' ಎಂಬ ಶೀರ್ಷಿಕೆಯಡಿ, ನುಡಿ ನಮನ ಮತ್ತು ಗೀತ ಗೌರವವನ್ನು ಆಯೋಜಿಸಲಾಗಿದೆ. ಇದೇ ಸಂದರ್ಭದಲ್ಲಿ ಹಿರಿಯ ಕವಿ ಹಾಗೂ ಬರಹಗಾರರಾದ ಡಾಕ್ಟರ್ ಸಿದ್ದಲಿಂಗ ಪಟ್ಟಣಶೆಟ್ಟಿ ಅವರಿಗೆ 85 ನೇ ಹುಟ್ಟು ಹಬ್ಬದ ಅಭಿನಂದನಾ ಸಮಾರಂಭ ಏರ್ಪಡಿಸಲಾಗಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

<><><>